# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 484
2. ಸದಸ್ಯರ ಹೆಸರು : ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರದಾವರು)
3. ಉತ್ತರಿಸಬೇಕಾದ ದಿನಾಂಕ : 16.09.2021.
4. ಉತ್ತರಿಸುವ ಸಚಿವರು : ಜಲಸಂಪನ್ಮೂಲ ಸಚಿವರು

<table>
<tr><th>ಕ್ರಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಎತ್ತಿನಹೊಳೆ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಸದರಿ ಯೋಜನೆಗೆ ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು;</td><td>ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ದಿನಾಂಕ:17.02.2014 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಯೋಜನೆಯ ಮೊದಲನೇ ಹಂತದ ಲಿಫ್ಟ್ ಕಾಮಗಾರಿಗಳನ್ನು ಮಾರ್ಚ್ 2014 ರಲ್ಲಿ ಪ್ರಾರಂಭಿಸಲಾಗಿರುತ್ತದೆ.<br><br>ಸದರಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಆಗಸ್ಟ್ 2021ರ ಅಂತ್ಯದವರಗೆ ಒಟ್ಟಾರೆ ರೂ.9,231.56 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ.</td></tr>
<tr><td>ಆ)</td><td>ಸದರಿ ಯೋಜನೆ ಪ್ರಾರಂಭವಾದಾಗಿನಿಂದ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) ಈ ಯೋಜನೆಯ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ; (ವಿವರಗಳನ್ನು ನೀಡುವುದು)</td><td>ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಆಗಸ್ಟ್ 2021ರ ಅಂತ್ಯದವರಗೆ ರೂ.9,231.56 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿದ್ದು, ವಾರ್ಷಿಕವಾರು ವಿವರಗಳು ಈ ಕೆಳಗಿನಂತಿವೆ.<br><br>ವರ್ಷಾವಾರು ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ವೆಚ್ಚ ಮಾಡಿರುವ ವಿವರಗಳು:
<table>
<tr><th>ಕ್ರಸಂ</th><th>ವರ್ಷ</th><th>ಮೊತ್ತ (ರೂ. ಕೋಟಿಗಳಲ್ಲಿ)</th></tr>
<tr><td>1</td><td>2012-13</td><td>0.38</td></tr>
<tr><td>2</td><td>2013-14</td><td>1.70</td></tr>
<tr><td>3</td><td>2014-15</td><td>1,140.35</td></tr>
<tr><td>4</td><td>2015-16</td><td>601.30</td></tr>
<tr><td>5</td><td>2016-17</td><td>441.28</td></tr>
<tr><td>6</td><td>2017-18</td><td>930.94</td></tr>
<tr><td>7</td><td>2018-19</td><td>1,550.95</td></tr>
<tr><td>8</td><td>2019-20</td><td>1,998.23</td></tr>
<tr><td>9</td><td>2020-21</td><td>1,945.79</td></tr>
<tr><td>10</td><td>2021-22 (ಆಗಸ್ಟ್ 2021 ರವರೆಗೆ)</td><td>620.65</td></tr>
<tr><td>ಒಟ್ಟು</td><td></td><td>9231.56</td></tr>
</table>
ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 02 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿರುತ್ತದೆ.
<ul>
<li>ಮೊದಲನೇ ಹಂತದ ಏತ ಮತ್ತು ವಿದ್ಯುತ್ ಪೂರೈಸುವ ಕಾಮಗಾರಿಗಳನ್ನು 7 ಪ್ಯಾಕೇಜ್‌ಗಳಾನ್ನಾಗಿ ವಿಂಗಡಿಸಿ ಟೆಂಡರ್ ಮೂಲಕ ಕೈಗೆತ್ತಿಕೊಂಡಿದ್ದು, ಪ್ರಸ್ತುತ ಸದರಿ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿರುತ್ತವೆ.</li>
<li>ಎರಡನೇ ಹಂತದ ಗುರುತ್ವ ನಾಲೆ ಹಾಗೂ ಫೀಡರ್ ಕಾಮಗಾರಿಗಳನ್ನು 35 ಪ್ಯಾಕೇಜುಗಳನ್ನಾಗಿ ವಿಂಗಡಿಸಿ ಟೆಂಡರ್ ಮೂಲಕ ಕೈಗೆತ್ತಿಕೊಂಡಿದ್ದು, ಪ್ರಸ್ತುತ ಸದರಿ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.</li>
<li>ಭೈರಗೊಂಡ್ಲು ಜಲಾಶಯದ ನಂತರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.</li>
</ul></td></tr>
</table>

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಇ) | ಎತ್ತಿನಹೊಳೆ ಯೋಜನೆಯಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಇದುವರೆವಿಗೂ ನೀಡಿರುವ ಅನುದಾನ ಮೊತ್ತವೆಷ್ಟು (ಸಂಪೂರ್ಣವಾದ ಮಾಹಿತಿ ನೀಡುವುದು) | • ಅನುದಾನವನ್ನು ಜಿಲ್ಲಾವಾರು ನಿಗಧಿಪಡಿಸಿರುವುದಿಲ್ಲ. ಈ ಯೋಜನೆಯಲ್ಲಿ ಬರುವ 7 ಜಿಲ್ಲೆಗಳಲ್ಲಿನ ಕಾಮಗಾರಿಗಳ ಅಂದಾಜು ಪ್ರಕಾರ ಕಾರ್ಯವನ್ನು ನಿರ್ವಹಿಸುತ್ತಿದ್ದು ಅವುಗಳ ವೆಚ್ಚಗಳಿಗೆ ಅನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br>• ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪ್ರಾರಂಭದಿಂದ ಭೈರಗೊಂಡ್ಲು ಜಲಾಶಯದವರೆಗಿನ ಎಲ್ಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಅದರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿಗೆ ಸಂಬಂಧಿಸಿದಂತೆ ರೂ.863.49 ಕೋಟಿಗಳ ಮೊತ್ತದ ಗೌರಿಬಿದನೂರು ಪೂರಕ ನಾಲೆಯ ಕಾಮಗಾರಿಯು ಪ್ರಗತಿಯಲ್ಲಿದ್ದು ಆಗಸ್ಟ್-2021ರ ವರಗೆ ರೂ.356.45ಕೋಟಿ ವೆಚ್ಚವಾಗಿರುತ್ತದೆ. |
| ಈ) | ಈ ಅನುದಾನದಲ್ಲಿ ಈ ಎರಡು ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ತಾಲ್ಲೂಕುವಾರು ಸಂಪೂರ್ಣವಾದ ಮಾಹಿತಿ ನೀಡುವುದು) | • ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಹಾಗೂ ಕೆರೆ ತುಂಬಿಸುವ ಫೀಡರ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸರ್ವೆಕಾರ್ಯ ಪೂರ್ಣಗೊಂಡಿದ್ದು, ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಲಾಗುತ್ತಿದೆ.<br>• ಈ ಜಿಲ್ಲೆಗಳಿಗೆ ಸಂಬಂಧಿಸಿದ ಕಾಮಗಾರಿಗಳು ಈ ಯೋಜನೆಯ ಅಂತಿಮ ಭಾಗದಲ್ಲಿರುವುದರಿಂದ, ಪ್ರಸಕ್ತ ಸಾಲಿನಲ್ಲಿ ಅಂದಾಜುಗಳಿಗೆ ತೀರುವಳಿ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ನಿಯಮಾನುಸಾರ ಅಗತ್ಯ ಕ್ರಮ ಜರುಗಿಸಲಾಗುತ್ತಿದೆ. |
| ಉ) | ಈ ಅನುದಾನವನ್ನು ಹಂಚಿಕೆ ಮಾಡುವಾಗ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಯೋಜನೆಗೆ ಆಯವ್ಯಯದಲ್ಲಿ ಒದಗಿಸುವ ಅನುದಾನವನ್ನು ಆದ್ಯತೆಯ ಅನುಸಾರ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗುತ್ತಿದೆ. |
| ಊ) | ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣವಾದ ಮಾಹಿತಿ ನೀಡುವುದು) | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಈ ಕೆಳಕಂಡ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಮೇರೆಗೆ 2023ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ.<br>• ಮೊದಲನೆ ಹಂತದ ಏತ ಮತ್ತು ವಿದ್ಯುತ್ ಕಾಮಗಾರಿಗಳು.<br>• ಎರಡನೆ ಹಂತದ ಗುರುತ್ವ ಕಾಲುವೆ ಕಾಮಗಾರಿಗಳು.<br>• ಭೈರಗೊಂಡ್ಲು ಜಲಾಶಯಕ್ಕಿಂತ ಮುಂಚೆ ಕವಲೊಡೆಯುವ ವಿವಿಧ ಫೀಡರ್ ಕಾಲುವೆ ಕಾಮಗಾರಿಗಳು.<br><br>ಭೈರಗೊಂಡ್ಲು ಜಲಾಶಯ ನಿರ್ಮಾಣ ಕಾಮಗಾರಿ, ಭೈರಗೊಂಡ್ಲು ಜಲಾಶಯದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರೊದಗಿಸುವ ಲಿಫ್ಟ್ ಕಾಮಗಾರಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಫೀಡರ್ ಕಾಲುವೆ ಕಾಮಗಾರಿಗಳನ್ನು ಸದರಿ ಜಲಾಶಯ ನಿರ್ಮಾಣದಲ್ಲಿ ಉದ್ಭವಿಸಿರುವ ಭೂಸ್ವಾಧೀನ ಸಮಸ್ಯೆ ಇತ್ಯರ್ಥಪಡಿಸಿ ನಂತರ ಕೈಗೊಳ್ಳಲು ಯೋಜಿಸಲಾಗಿದೆ. |

**ಸಂಖ್ಯೆ: ಜಸಂಇ 68 ಡಬ್ಲ್ಯೂಎಲ್ಎ 2021**

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು